ದಿನಾಂಕಃ 02-05-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ** ಪ್ರತಿವಾದಿ 23 ಮತ್ತು 24 ರವರ ಪರ ವಕೀಲರಿಂದ,

1) 4 ನೇ ಪ್ರತಿವಾದಿಯ ಮಕ್ಕಳನ್ನು ಈ ದಾವೆಯಲ್ಲಿ ಪಕ್ಷಗಾರರನ್ನಾಗಿ ಮಾಡಿರುವುದಿಲ್ಲ. ದಾವಾ ಐಟಂ ನಂ. 7 ಆಸ್ತಿ ಪಿತ್ರಾರ್ಜಿತ ಆಸ್ತಿ ಆಗಿರುವುದಿಲ್ಲ ಎಂದರೆ ಸರಿಯಲ್ಲ. ಹೊನ್ನೇಗೌಡ ರವರು ಮಾಡಿಕೊಂಡಿರುವ ವಿಭಾಗ ಪತ್ರವನ್ನು ನಾನು ನೋಡಿರುವುದಿಲ್ಲ. ನಾನು ಹಾಜರುಪಡಿಸಿರುವ ದಾಖಲಾತಿಗಳನ್ನು ನಾನು ಮತ್ತು ಗಂಡ ಪಡೆದುಕೊಂಡಿರುತ್ತೇವೆ. ವಿಭಾಗ ಪತ್ರದ ಬಗ್ಗೆ ಈ ದಾವೆ ಸಲ್ಲಿಸಿರುವ ಕಾಲಕ್ಕೆ ನನಗೆ ಗೊತ್ತಿರುತ್ತದೆ. ನಾನು ವಿಭಾಗ ಪತ್ರವನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಐಟಂ ನಂ. 7 ಆಸ್ತಿ ನನ್ನ ತಂದೆಯ ಪಿತ್ರಾರ್ಜಿತ ಆಸ್ತಿ ಎಂದು ತೋರಿಸಲು ಕಂದಾಯ ದಾಖಲಾತಿಯನ್ನು ಹಾಜರುಪಡಿಸಿರುವುದಿಲ್ಲ. ಗೌರಮ್ಮ ಎಂಬುವವರು ನನಗೆ ಗೊತ್ತಿರುವುದಿಲ್ಲ. ನಾನು ಹಾಜರುಪಡಿಸಿರುವ ದಾಖಲಾತಿಗಳ ಬಗ್ಗೆ ನನಗೆ ಗೊತ್ತಿರುವುದಿಲ್ಲ. ನಾನು ಅಕ್ರಮ ಲಾಭ ಪಡೆಯುವ ಸಲುವಾಗಿ ಸುಳ್ಳು ಸಾಕ್ಷವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲಃ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ